15

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ **2017-18ನೇ** ಸಾಲಿನಲ್ಲಿ 2016-17ನೇ ಸಾಲಿಗೆ ಸಂಬಂಧಿಸಿದಂತೆ **ಅನಿಲ ಯೋಜನೆಯಡಿ** ರಾಜ್ಯ ಸಹಾಯಧನ ಬಿಡುಗಡೆ ಕುರಿತು.

## ಪ್ರಸ್ತಾವನೆ :

**2017-18ನೇ** ಸಾಲಿನ ರಾಜ್ಯ ಆಯವ್ಯಯದ **ಲೆಕ್ಕ ಶೀರ್ಷಿಕೆ 2810-01-198-1-01-300 (Lumpsum)** ರಡಿ **ರೂ.150.00 ಲಕ್ಷ**ಗಳನ್ನು ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಜೈವಾನಿಲ ಸ್ಥಾವರಗಳಿಗೆ ಹಿಂದಿನ ಸಾಲುಗಳ ಬಾಕಿ ರಾಜ್ಯ ಸಹಾಯಧನ ಪಾವತಿಗಾಗಿ **ಅನಿಲ ಯೋಜನೆಯಡಿ** ನಿಗದಿಪಡಿಸಿದೆ.

**2016-17ನೇ** ಸಾಲಿನಲ್ಲಿ ಬೆಳಗಾವಿ, ದಕ್ಷಿಣ ಕನ್ನಡ ಮತ್ತು ಮಂಡ್ಯ ಜಿಲ್ಲಾ ಪಂಚಾಯತ್‌ಗಳಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ **ರೂ.35.80ಲಕ್ಷಗಳು** ಪಾವತಿಗಾಗಿ ಬಾಕಿ ಇದ್ದು, ಈ ಅನುದಾನವನ್ನು **2017-18ನೇ** ಸಾಲಿನಲ್ಲಿ ಆಯವ್ಯಯದ ಲೆಕ್ಕ ಶೀರ್ಷಿಕೆ **2810-01-198-1-01-300 (Lumpsum)** ರಡಿ ನಿಗದಿಪಡಿಸಿದ ಅನುದಾನ ರೂ.150.00ಲಕ್ಷಗಳಲ್ಲಿ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/30/ಜೈಅಯೋ/2017, ಬೆಂಗಳೂರು, ದಿನಾಂಕ 05.06.2017.**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, **2017-18ನೇ** ಸಾಲಿನಲ್ಲಿ **2016-17ನೇ** ಸಾಲಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಾಕಿ ಇರುವ ರಾಜ್ಯ ಸಹಾಯಧನ ಪಾವತಿಸಲು **ರೂ.35.80ಲಕ್ಷ (ಮೂವತ್ತೈದು ಲಕ್ಷದ ಎಂಬತ್ತು ಸಾವಿರ ರೂಪಾಯಿಗಳು ಮಾತ್ರ)**ಗಳನ್ನು ಕೆಳಕಂಡ ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

| ಕ್ರ.ಸಂ | ಜಿಲ್ಲಾ ಪಂಚಾಯತ್ | ಬಿಡುಗಡೆ ಮಾಡಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | ಬೆಳಗಾವಿ | 27.73 |
| 2 | ದಕ್ಷಿಣ ಕನ್ನಡ | 7.25 |
| 3 | ಮಂಡ್ಯ | 0.82 |
| | **ಒಟ್ಟು** | **35.80** |

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟು ಬಿಡುಗಡೆ ಮಾಡಲಾಗುತ್ತಿದ್ದು, ಉದ್ದೇಶಿತ ಕಾರ್ಯಕ್ರಮಕ್ಕಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಹಾಗೂ ವ್ಯಪಗತ ಮಾಡತಕ್ಕದಲ್ಲ. **ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಸದರಿ ಅನುದಾನವನ್ನು ಗಾಂಧಿ ಸಾಕ್ಷಿ ಕಾಯಕದಡಿ ಇಂಧೀಕರಿಸಿ ಬಿಡುಗಡೆ ಮಾಡತಕ್ಕದ್ದು.**

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಲೆಕ್ಕ ಶೀರ್ಷಿಕೆ **2810-01-198-1-01-300**ರಡಿ ವೆಚ್ಚ ಭರಿಸಿ, ನಿಗದಿತ ನಮೂನೆಯಲ್ಲಿ ಹಣಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ನೀಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 01 ಟಿಎಫ್‌ಪಿ 2017, ದಿನಾಂಕ 05.04.2017ರ ಆದೇಶದನ್ವಯ ಆಡಳಿತ ಇಲಾಖಾ ಮುಖ್ಯಸ್ಥರಿಗೆ ಆರ್ಥಿಕ ವಿತ್ತಾಧಿಕಾರ ಪ್ರತ್ಯಾಯೋಜಿಸಿರುವ ಮೇರೆಗೆ ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ: ಗ್ರಾಅಪ 194 ಪಿಬಿಎಸ್ 2017, ದಿನಾಂಕ 01.06.2017ರಲ್ಲಿ ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಳಗಾವಿ, ದಕ್ಷಿಣ ಕನ್ನಡ ಮತ್ತು ಮಂಡ್ಯ.
3. ಜಿಲ್ಲಾ ಖಜಾನಾಧಿಕಾರಿಗಳು, ಬೆಳಗಾವಿ, ದಕ್ಷಿಣ ಕನ್ನಡ ಮತ್ತು ಮಂಡ್ಯ.
4. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ ನಂ. 49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
5. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಸರ್ಕಾರದ ಪ್ರದಾನ ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.